ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು

ಸಂಖ್ಯೆ : ಸಿ5(5)ದ್ವಿ.ದ.ಸ ಬಡ್ತಿ–49/2020–21 ದಿನಾಂಕ : 06–02–2021

### ಜ್ಞಾಪನ

ವಿಷಯ : ಆಯುಕ್ತಾಲಯ ಘಟಕ ಕಛೇರಿಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರೂಪ್ ಡಿ ನೌಕರರಿಗೆ ದ್ವಿತೀಯ ದರ್ಜೆ ಸಹಾಯಕರ ವೃಂದಕ್ಕೆ ಸ್ಥಾನಾಪನ್ನ ಬಡ್ತಿ ನೀಡಿದ್ದು ಬಡ್ತಿ ಮುಂದೂಡಿಕೊಳ್ಳಲು ಅನುಮತಿ ನೀಡುವ ಬಗ್ಗೆ.

ಉಲ್ಲೇಖ: 1.ಈ ಕಛೇರಿ ಸಮ ಸಂಖ್ಯೆಯ ಅಧಿಸೂಚನೆ ದಿನಾಂಕ: 30–01–2021
2. ನೌಕರರು ಸಲ್ಲಿಸಿರುವ ಲಿಖಿತ ಮನವಿಗಳು

************

ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ಆಯುಕ್ತಾಲಯ ಘಟಕ ಕಛೇರಿಯ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಈ ಕೆಳಕಂಡ ಗ್ರೂಪ್ ಡಿ ನೌಕರರಿಗೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಗ್ರೂಪ್ "ಸಿ" ವೃಂದದ ವೇತನ ಶ್ರೇಣಿ ರೂ **21,400–42,000** ರಲ್ಲಿ ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ಉಲ್ಲೇಖ–2ರ ಅಧಿಸೂಚನೆಯಂತೆ ಸ್ಥಾನಾಪನ್ನ ಮುಂಬಡ್ತಿ ನೀಡಿ ಆದೇಶಿಸಲಾಗಿರುತ್ತದೆ.

ಸದರಿ ಜ್ಞಾಪನದಲ್ಲಿ ಕರ್ನಾಟಕ ಸಿವಿಲ್ ಸೇವಾ [ಸಾಮಾನ್ಯ ನೌಕರಿ ಭರ್ತಿ] ನಿಯಮಗಳು–1977ರ ನಿಯಮ 4ಎ ರಂತೆ ಬಡ್ತಿ ನೀಡಲಾದ ಈ ಕೆಳಕಂಡ ನೌಕರರು ಅಂಥ ಬಡ್ತಿಯನ್ನು ಹೊಂದಲು ಇಚ್ಛಿಸದಿದ್ದರೆ, ಉಲ್ಲೇಖ–1 ರ ಆದೇಶದ ದಿನಾಂಕದಿಂದ [ಸದರಿ ಆದೇಶದ ಅಧಿಸೂಚನೆಯನ್ನು ಇಲಾಖಾ ವೆಬ್‌ಸೈಟ್ www.schooleducation.kar.in ನಲ್ಲಿ ಪ್ರಕಟಿಸಲಾಗಿದೆ] 07ದಿನಗಳ(ದಿನಾಂಕ:05–02–2021ರೊಳಗೆ) ಒಳಗೆ ನೀಡಲಾದ ಮುಂಬಡ್ತಿಯನ್ನು ಬಿಟ್ಟುಕೊಡಲು ನೇಮಕಾತಿ ಪ್ರಾಧಿಕಾರದ ಅನುಮತಿಯನ್ನು ಕೋರಿ ಲಿಖಿತ ಮನವಿಯನ್ನು ಮುದ್ದಾಂ ಈ ಕಛೇರಿಗೆ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ಉಲ್ಲೇಖ_02ರಂತೆ ಈ ಕೆಳಕಂಡ ನೌಕರರು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗೆ ನೀಡಿರುವ ಬಡ್ತಿಯನ್ನು ತಾತ್ಕಾಲಿಕವಾಗಿ ಮುಂದೂಡಲು ಲಿಖಿತ ಮನವಿಯನ್ನು ಸಲ್ಲಿಸಿರುತ್ತಾರೆ.

| ಕ್ರ.ಮ ಸಂಖ್ಯೆ | ಜೇಷ್ಠತಾ ಸಂಖ್ಯೆ | ವರ್ಗ | ನೌಕರರ ಹೆಸರು ಮತ್ತು ವಿಳಾಸ ಶ್ರೀ / ಶ್ರೀಮತಿ |
|---|---|---|---|
| 1 | 262 | ಇತರೆ | ಟಿ. ಚಿಕ್ಕಮ್ಮ, ಗ್ರೂಪ್ ಡಿ ನೌಕರರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು. |
| 2 | 272 | ಇತರೆ | ಹೆಚ್.ಬಿ ಭಾರತಿ, ಗ್ರೂಪ್ ಡಿ ನೌಕರರು, ಡಿ.ಎಸ್.ಇ.ಆರ್.ಟಿ ಕಛೇರಿ ಬೆಂಗಳೂರು |

ಈ ಮೇಲ್ಕಂಡ ನೌಕರರ ಕೋರಿಕೆಯನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 57 ಎಸ್‌ಆರ್‌ಆರ್ 2001 ದಿನಾಂಕ: 22–05–2002ರಲ್ಲಿ ವಿಷದಪಡಿಸಿರುವಂತೆ, ಕರ್ನಾಟಕ ನಾಗರೀಕ ಸೇವಾ ನಿಯಮ (ಸಾಮಾನ್ಯ ನೇಮಕಾತಿ ನಿಯಮಗಳು) 1977ರಲ್ಲಿನ 4ಎ ರಂತೆ ಪರಿಗಣಿಸಿ ಸದರಿಯವರಿಗೆ ಒಂದು ವರ್ಷ ಅಥವಾ ಮುಂದೆ ನೀಡುವ ಪದೋನ್ನತಿ ಇದರಲ್ಲಿ ಯಾವುದು ನಂತರವೋ ಅಲ್ಲಿಯವರೆಗೆ ಗ್ರೂಪ್ ಡಿ ಸಹಾಯಕರಾಗಿ ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದಲ್ಲಿ ಮುಂದುವರೆಯಲು ಅನುಮತಿ ನೀಡಿದೆ.

[ಮಾನ್ಯ ಆಯುಕ್ತರ ಆದೇಶದ ಮೇರೆಗೆ]

[ಸಿರಿಯಣ್ಣವರ ಲಲಿತಾ ಚಂದ್ರಶೇಖರ್]
ನಿರ್ದೇಶಕರು [ಆಡಳಿತ][ಹೆ.ಪ್ರ]

6/2

ಇವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ, 100 ಅಡಿ ರಿಂಗ್ ರಸ್ತೆ, ಹೊಸಕೆರೆಹಳ್ಳಿ ಬೆಂಗಳೂರು.
3. ನಿರ್ದೇಶಕರು, ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು.
4. ಹಿರಿಯ ಸಹಾಯಕ ನಿರ್ದೇಶಕರು ಇ–ಆಡಳಿತ ರವರಿಗೆ ಈ ಅಧಿಸೂಚನೆಯನ್ನು ಇಲಾಖಾ ವೆಬ್ ಸೈಟ್– www.schooleducation.kar.in "ನಲ್ಲಿ ಪ್ರಕಟಿಸಲು ತಿಳಿಸಿದೆ.
5. ಕಛೇರಿ ಪ್ರತಿ.